# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ :910
ಸದಸ್ಯರ ಹೆಸರು :ಡಾ|| ಎಂ.ಜಿ. ಮುಳೆ
ಉತ್ತರಿಸುವ ಸಚಿವರು :ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ :11.03.2026

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಬೀದರ್ ಜಿಲ್ಲೆಯಲ್ಲಿ ಪ್ರಸ್ತುತ ಎಷ್ಟು ಗ್ರಾಮಗಳು ಕೆ.ಕೆ.ಆರ್.ಟಿ.ಸಿ (KKRTC) ಬಸ್ ಸೌಲಭ್ಯದಿಂದ ವಂಚಿತವಾಗಿವೆ; ಈ ಪೈಕಿ ಕನಿಷ್ಠ ಮೂಲಭೂತ ಸಾರಿಗೆ ವ್ಯವಸ್ಥೆಯೂ ಇಲ್ಲದ ಗ್ರಾಮಗಳ ಪಟ್ಟಿಯನ್ನು ಒದಗಿಸುವುದು; | ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯ ಬೀದರ ಜಿಲ್ಲೆಯ ಒಟ್ಟು 667 ಜನವಸತಿ ಗ್ರಾಮಗಳ ಪೈಕಿ 664 ಗ್ರಾಮಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಳಿದ 03 ಗ್ರಾಮಗಳಾದ ಮುತಖೇಡ, ಮುರ್ಗಾ, ಬಾಳೂರು ಗಳಿಗೆ ಭಾರೀ ವಾಹನಗಳ ಕಾರ್ಯಾಚರಣೆಗೆ ಯೋಗ್ಯ ರಸ್ತೆ ಇಲ್ಲದಿರುವುದರಿಂದ ರಸ್ತೆ ಸೌಲಭ್ಯ ಇರುವ ಸಮೀಪದ ಗ್ರಾಮದವರೆಗೂ ಬಸ್ ಸೌಕರ್ಯ ಕಲ್ಪಿಸಲಾಗಿದೆ. |
| ಆ. | 2025-26ನೇ ಸಾಲಿನಲ್ಲಿ ಬೀದರ್ ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳ ನಡುವೆ ಎಷ್ಟು ಹೊಸ ಬಸ್ ಮಾರ್ಗಗಳನ್ನು (New Routes) ಪ್ರಾರಂಭಿಸಲು ಅನುಮೋದನೆ ನೀಡಲಾಗಿದೆ. ಈ ಹೊಸ ಮಾರ್ಗಗಳ ಆಯ್ಕೆಗೆ ಮಾನದಂಡಗಳೇನು; | 2025-26ನೇ ಸಾಲಿನಲ್ಲಿ ಸಾರ್ವಜನಿಕ ಪ್ರಯಾಣಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಅನುಕೂಲಕ್ಕಾಗಿ 151 ಸುತ್ತುವಳಿಗಳನ್ನು ಹೆಚ್ಚಿಸಿ, ಬೀದರ್ ನಗರದಲ್ಲಿ 02 ಹೊಸ ನಗರ ಸಾರಿಗೆಗಳನ್ನು ಪ್ರಾರಂಭಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br>ಹೊಸ ಮಾರ್ಗಗಳನ್ನು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳ ಬೇಡಿಕೆ/ ಅವಶ್ಯಕತೆಗನುಗುಣವಾಗಿ ಆಯ್ಕೆ ಮಾಡಲಾಗುತ್ತಿದ್ದು, ಅದರಂತೆ ಹೊಸ ಮಾರ್ಗ/ಸರತಿಗಳನ್ನು ಹೆಚ್ಚಿಸಿ ಸಾರಿಗೆ ಸೌಲಭ್ಯವನ್ನು ಆದ್ಯತೆಯ ಮೇರೆಗೆ ಕಲ್ಪಿಸಲಾಗುತ್ತಿದೆ. |
| ಇ. | ಶಾಲಾ-ಕಾಲೇಜು ವಿದ್ಯಾರ್ಥಿಗಳ ದಟ್ಟಣೆಯನ್ನು ಪರಿಗಣಿಸಿ, ಬೀದರ್ ಜಿಲ್ಲೆಯಲ್ಲಿ 'ವಿದ್ಯಾರ್ಥಿ ವಿಶೇಷ' (Student Special) ಬಸ್‌ಗಳನ್ನು ಹೆಚ್ಚಿಸಲು ಕೈಗೊಂಡಿರುವ ಕ್ರಮಗಳೇನು; ಕಳೆದ ಒಂದು ವರ್ಷದಲ್ಲಿ ಎಷ್ಟು ಹೆಚ್ಚುವರಿ ಟ್ರಿಪ್‌ಗಳನ್ನು ಮಂಜೂರು ಮಾಡಲಾಗಿದೆ; | ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಬೀದರ್ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಲ್ಲಿ 151 ಸುತ್ತುವಳಿಗಳನ್ನು ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರಸ್ತುತ ಕಲ್ಪಿಸಿರುವ ಸಾರಿಗೆ ಸೌಲಭ್ಯದ ಪ್ರಯೋಜನವನ್ನು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿರುತ್ತಾರೆ. |
| ಈ. | ಬೀದರ್ ವಿಭಾಗದಲ್ಲಿ ಪ್ರಸ್ತುತ ಚಾಲನೆಯಲ್ಲಿರುವ ಬಸ್‌ಗಳ ಪೈಕಿ 10 ವರ್ಷಕ್ಕೂ ಹಳೆಯದಾದ ಮತ್ತು ನಿಗದಿತ ಕಿಲೋಮೀಟರ್ ಪೂರೈಸಿರುವ ಬಸ್‌ಗಳ ಸಂಖ್ಯೆ ಎಷ್ಟು; ಇವುಗಳನ್ನು ಬದಲಾಯಿಸಲು ಹೊಸ ಬಸ್‌ಗಳ ಹಂಚಿಕೆಯಲ್ಲಿ ಜಿಲ್ಲೆಗೆ ಆದ್ಯತೆ ನೀಡಲಾಗಿದೆಯೇ; | ಕೇಂದ್ರ ಸರ್ಕಾರದ ಅಧಿಸೂಚನೆ ಸಂಖ್ಯೆ: GSR 29 (E), ದಿನಾಂಕ:16.01.2023ರನ್ವಯ ಹಾಗೂ ರಾಜ್ಯ ಸರ್ಕಾರದ ನಿರ್ದೇಶನದನುಸಾರ ಸಾರಿಗೆ ನಿಗಮಗಳ ಬಸ್‌ಗಳನ್ನು ನಿರುಪಯುಕ್ತಗೊಳಿಸಲು 15 ವರ್ಷ ವಯೋಮಾನವನ್ನು ನಿಗದಿಪಡಿಸಿದ್ದು, ಕ.ರಾ.ರ.ಸಾ.ನಿಗಮದ ಯಾಂತ್ರಿಕ ಇಲಾಖೆಯಿಂದ ಹೊರಡಿಸಿರುವ ಸುತ್ತೋಲೆ ಸಂಖ್ಯೆ:810/2023 ದಿನಾಂಕ: 23.09.2023 ರನ್ವಯ ನಿಗಮದಲ್ಲಿನ ಬಸ್ಸುಗಳನ್ನು ನಿಷ್ಕ್ರಿಯಗೊಳಿಸಲು **'ಅನುಬಂಧ'ದಲ್ಲಿ** ಸೂಚಿಸಿರುವ ಮಾನದಂಡಗಳನ್ನು ಅನುಸರಿಸಲಾಗುತ್ತಿರುತ್ತದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | ಬೀದರ್ ವಿಭಾಗದಲ್ಲಿ ಪ್ರಸ್ತುತ 626 ಬಸ್ಸುಗಳು ಕಾರ್ಯಾಚರಣೆಯಲ್ಲಿದ್ದು, 10 ವರ್ಷಕ್ಕೂ ಹಳೆಯದಾದ 202 ಬಸ್ಸುಗಳು ಕಾರ್ಯಾಚರಣೆಗೊಳ್ಳುತ್ತಿರುತ್ತವೆ ಹಾಗೂ ನಿಗದಿತ ಕಿ.ಮೀ. ಕ್ರಮಿಸಿರುವ 02 BS-II ವಾಹನಗಳು ಹಾಗೂ 147 BS-III ವಾಹನಗಳು ಇರುತ್ತವೆ. ನಿರುಪಯುಕ್ತಗೊಳಿಸಲು ನಿಗಧಿಪಡಿಸಲಾದ 15 ವರ್ಷ ಪೂರೈಸಿರುವ ಯಾವುದೇ ಬಸ್ಸುಗಳು ಇರುವುದಿಲ್ಲ ಹಾಗೂ ಕಾರ್ಯಾಚರಣೆಯಲ್ಲಿರುವ **ಎಲ್ಲಾ ಬಸ್‌ಗಳು ಸುಸ್ಥಿತಿಯಲ್ಲಿರುತ್ತವೆ.**<br><br>ಪ್ರತಿ ವರ್ಷ ನಿಗಮದ ಬಸ್‌ಗಳನ್ನು ಅರ್ಹತಾ ಪತ್ರ ನವೀಕರಣಕ್ಕೆ ಒಳಪಡಿಸಿ ಸುಸ್ಥಿಯಲ್ಲಿರುವುದನ್ನು ಖಾತ್ರಿಪಡಿಸಿಕೊಂಡು ಕಾರ್ಯಾಚರಣೆಗೊಳಿಸಲಾಗುತ್ತಿರುತ್ತದೆ.<br><br>2025-26ನೇ ಸಾಲಿನಲ್ಲಿ 450 ನಿಷ್ಕ್ರಿಯ ವಾಹನಗಳ ಬದಲಾವಣೆಗೆ ಹಾಗೂ 300 ವಾಹನಗಳನ್ನು ಹೊಸ ಮಾರ್ಗಗಳ ಮೇಲೆ ಕಾರ್ಯಾಚರಣೆಗೊಳಿಸಲು ಈ ರೀತಿ ಒಟ್ಟಾರೆಯಾಗಿ 750 ವಿವಿಧ ಮಾದರಿಯ ಹೊಸ ಬಸ್ಸುಗಳನ್ನು ಖರೀದಿಸಲು ಯೋಜನೆ ರೂಪಿಸಲಾಗಿದ್ದು, ಈ ಪೈಕಿ 400 ಬಸ್ಸುಗಳ ಖರೀದಿಗೆ ಟೆಂಡರ್ ಪ್ರಕ್ರಿಯೆ ಕೈಗೊಳ್ಳಲಾಗಿದ್ದು, ಸದರಿ ಬಸ್ಸುಗಳ ಖರೀದಿಗೆ ಅನುದಾನ ಮಂಜೂರಾತಿ ಕೋರಿ ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ. ಅನುದಾನ ಲಭ್ಯತೆಯನುಸಾರವಾಗಿ ನಿಗಮಕ್ಕೆ ಹೊಸ ಬಸ್ಸುಗಳು ಸರಬರಾಜು ಆದನಂತರ ಅವಶ್ಯಕತೆಗೆ ಅನುಗುಣವಾಗಿ ಬಸ್ಸುಗಳನ್ನು ಆದ್ಯತೆಯ ಮೇರೆಗೆ ಒದಗಿಸಲಾಗುವುದು. |
| ಉ. | ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (KKRDB) ಅಥವಾ ಸಾರಿಗೆ ಇಲಾಖೆಯ ವತಿಯಿಂದ ಬೀದರ್ ಜಿಲ್ಲೆಗೆ 2025-26ನೇ ಸಾಲಿಗೆ ವಿಶೇಷವಾಗಿ ಎಷ್ಟು ಹೊಸ ಬಸ್‌ಗಳನ್ನು (New Fleet) ಮಂಜೂರು ಮಾಡಲಾಗಿದೆ; ಇದರಲ್ಲಿ ಸಾಮಾನ್ಯ ಮತ್ತು ಹವಾನಿಯಂತ್ರಿತ/ಇ-ಬಸ್ ಗಳ ಅನುಪಾತ ಎಷ್ಟು? | ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವತಿಯಿಂದ ಕಳೆದ 03 ವರ್ಷದಲ್ಲಿ ಬೀದರ್ ವಿಭಾಗಕ್ಕೆ ವಿವಿಧ ಮಾದರಿಯ 131 ಹೊಸ ವಾಹನಗಳನ್ನು ಹಂಚಿಕೆ ಮಾಡಲಾಗಿದ್ದು, 2025-26ನೇ ಸಾಲಿನಲ್ಲಿ ಇದುವರೆಗೆ 04 ಹೊಸ ಬಸ್ಸುಗಳನ್ನು ಬೀದರ ಜಿಲ್ಲೆಗೆ ಒದಗಿಸಲಾಗಿದೆ. ಸದರಿ ಬಸ್ಸುಗಳು ನಗರ ಸಾರಿಗೆ ಬಸ್ಸುಗಳಾಗಿದ್ದು, ಯಾವುದೇ ಹವಾ ನಿಯಂತ್ರಿತ ಮತ್ತು ವಿದ್ಯುತ್ ಬಸ್ಸುಗಳನ್ನು ಒದಗಿಸಿರುವುದಿಲ್ಲ. |

ಸಂಖ್ಯೆ: ಟಿಡಿ 34 ಟಿಸಿಕ್ಯೂ 2026

**(ರಾಮಲಿಂಗಾರೆಡ್ಡಿ)**

ಸಾರಿಗೆ ಮತ್ತು ಮುಜರಾಯಿ ಸಚಿವರು

ಅನುಬಂಧ-1

| ಕ್ರ.ಸಂ | ವಾಹನ ತಯಾರಿಕೆ/ ಮಾದರಿ | ಪರಿಷ್ಕರಿಸಿ, ನಿಗಧಿಪಡಿಸಿರುವ ಕಿ.ಮೀ. /ವರ್ಷ |
|---|---|---|
| 1 | ಲೇಲ್ಯಾಂಡ್, ಟಾಟಾ, ಐಷರ್ ಮತ್ತು ಇನ್ನಿತರೆ ತಯಾರಿಕೆಯ ಕರ್ನಾಟಕ ಸಾರಿಗೆ, ರಾಜಹಂಸ / ವೈಭವ, ನಾನ್ ಎ.ಸಿ. ಸ್ಲೀಪರ್ ವಾಹನಗಳು (ಮಿಡಿ, ಗ್ರಾಮಾಂತರ ಸಾರಿಗೆ ಮತ್ತು ದ್ವಿದ್ವಾರ ನಗರ ಸಾರಿಗೆ ಹೊರತುಪಡಿಸಿ) | **11.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 2 | ಲೇಲ್ಯಾಂಡ್, ಟಾಟಾ, ಐಷರ್ ಮತ್ತು ಇನ್ನಿತರೆ ತಯಾರಿಕೆಯ ಮಿಡಿ, ಗ್ರಾಮಾಂತರ ಸಾರಿಗೆ ದ್ವಿದ್ವಾರ ನಗರ ಸಾರಿಗೆ ಹಾಗೂ ಎಲ್ಲಾ ಇಲಾಖಾ ವಾಹನಗಳು.(ಕಾರು/ಜೀಪು ಹೊರತುಪಡಿಸಿ) | **9.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 3 | ವೋಲ್ವೋ ನಗರ ಸಾರಿಗೆ ವಾಹನಗಳು | **13.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 4 | ವೋಲ್ವೋ ಸೀಟರ್ ಮತ್ತು ಸ್ಲೀಪರ್ ವಾಹನಗಳು | **15.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 5 | ಮರ್ಸಿಡೀಸ್ ಬೆಂಜ್ ಸೀಟರ್ ವಾಹನಗಳು | **13.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 6 | ಸ್ಕ್ಯಾನಿಯ ಸೀಟರ್ ವಾಹನಗಳು | **13.00 ಲಕ್ಷ ಕಿ.ಮೀ. ಅಥವಾ 15 ವರ್ಷ** |
| 7 | ಕರೋನಾ ಎ.ಸಿ. ಮತ್ತು ನಾನ್ ಎ.ಸಿ. ಸ್ಲೀಪರ್ ವಾಹನಗಳು | **11.00 ಲಕ್ಷ ಕಿ.ಮೀ. ಅಥವಾ 15 ವರ್ಷ** |

ಮುಖ್ಯ ಯಾಂತ್ರಿಕ ಅಭಿಯಂತರರು





erated from eOffice by Shilpa M Sudi, TD-SO-ASST(SMS), ...